ವಿಷಯ:- ಚಿಕ್ಕಮಗಳೂರು ತಾಲ್ಲೂಕಿನ ಮಳಲೂರು ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯಕ್ಕೆ ಅನುದಾನ ಮಂಜೂರಾತಿ.

ಚುಕ್ಕೆ ಗುರುತಿನ ಪ್ರಶ್ನೆ : 477 (2363)

ಶ್ರೀ ಸಿ.ಆರ್.ಸಗೀರ್ ಅಹಮದ್ (ಚಿಕ್ಕಮಗಳೂರು):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ.?

ಅ ಚಿಕ್ಕಮಗಳೂರು ತಾಲ್ಲೂಕು, ಮಳಲೂರು ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಘಟಕ ಅಥವಾ 10 ಹಾಸಿಗೆಯ ಆಸ್ಪತ್ರೆಯನ್ನು ಸ್ಥಾಪಿಸಲು ಸರ್ಕಾರವು ಗ್ರಾಂಟ್ಸ್‌ನ್ನು ಮಂಜೂರು ಮಾಡಿರುವುದೇ ?

ಆ ಹಾಗಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗಿತ್ತು ಹಾಗೂ ಕೆಲಸ ಯಾವ ಹಂತದಲ್ಲಿದೆ.

ಇ ಇಲ್ಲದಿದ್ದಲ್ಲಿ ಪ್ರಸಕ್ತ ವಾರ್ಷಿಕ ಯೋಜನೆಯಲ್ಲಿ ಒದಗಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ?

ಶ್ರೀ ಜಿ.ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ ಇಲ್ಲ.

ಆ ಉದ್ಭವಿಸುವುದಿಲ್ಲ.

ಇ ಇಲ್ಲ.

ಶ್ರೀ ಸಿ.ಆರ್.ಸಗೀರ್ ಅಹ್ಮದ್:- ಮಾನ್ಯ ಅಧ್ಯಕ್ಷಿಣಿಯವರೆ, ಚಿಕ್ಕಮಗಳೂರು ತಾಲ್ಲೂಕಿನ ಮಳಲೂರು ಮಂಡಲ ಪಂಚಾಯಿತಿ ವ್ಯಾಪ್ತಿಯಲ್ಲಿ ಒಂದು 10 ಹಾಸಿಗೆಯ ಆಸ್ಪತ್ರೆಯನ್ನು ಪ್ರಾರಂಭ ಮಾಡಲು ಸರ್ಕಾರ ಅನುಮತಿಯನ್ನು ನೀಡಿದೆಯೇ ಎಂದು ನಾನು ಪ್ರಶ್ನೆಯನ್ನು ಕೇಳಿದ್ದೇನೆ. ಅದಕ್ಕೆ ಇಲ್ಲವೆಂದು ಸರ್ಕಾರ ಉತ್ತರ ಕೊಟ್ಟಿದೆ.

ಛೇರ್ಮನ್:-ಮಾನ್ಯ ಸದಸ್ಯರು ಪ್ರಶ್ನೆಯನ್ನು ಕೇಳಿ. ಪ್ರಶ್ನೆ ಉತ್ತರ ಎಲ್ಲವನ್ನು ರಿಪೀಟ್ ಮಾಡಬೇಡಿ. ನಿಮಗೇನು ಬೇಕೆನ್ನುವ ಪ್ರಶ್ನೆಯನ್ನು ಕೇಳಿ?

ಶ್ರೀ ಸಿ.ಆರ್.ಸಗೀರ್ ಅಹ್ಮದ್:- ಮಾನ್ಯ ಅಧ್ಯಕ್ಷಿಣಿಯವರೆ, ಮಾನ್ಯ ಮಂತ್ರಿಗಳಲ್ಲಿ ನನ್ನ ಮಳಲೂರು ಗ್ರಾಮಪಂಚಾಯಿತಿಯ ವ್ಯಾಪ್ತಿಯಲ್ಲಿ ಆಸ್ಪತ್ರೆಯನ್ನು ತೆರೆಯುವಾಗ ಯಾರಾದರೂ ದಾನಿಗಳು ಮುಂದೆ ಬಂದಾಗ ಇದಕ್ಕೆ ಸರ್ಕಾರ ಅನುಮತಿಯನ್ನು ನೀಡುತ್ತದೆಯೇ ಎನ್ನುವುದು ನನ್ನ ಉಪ ಪ್ರಶ್ನೆ.

ಶ್ರೀ ಜಿ.ಪುಟ್ಟಸ್ವಾಮಿಗೌಡ:-ಮಾನ್ಯ ಸದಸ್ಯರಿಗೆ ಆಸ್ಪತ್ರೆಬೇಕು, ಅದಕ್ಕೆ ಈ ಪ್ರಶ್ನೆಯನ್ನು ಹಾಕಿದ್ದಾರೆಂದು ಕಾಣುತ್ತದೆ. ದಾನಿಗಳು ಮುಂದೆ ಬಂದರೆ ಆಸ್ಪತ್ರೆಯನ್ನು ಕೊಡುತ್ತೀರಾ ಎನ್ನುವ ಪ್ರಶ್ನೆ. ಆಸ್ಪತ್ರೆಯನ್ನು ಮಂಜೂರು ಮಾಡುವುದಕ್ಕೆ ತನ್ನದೇ ಆದಂತಹ ಕೆಲವು ನಿಯಮಗಳು ಇವೆ. ಪ್ರಚಾಸಂಖ್ಯೆ ಮತ್ತು ಸುತ್ತಮುತ್ತಲಿನ ಗ್ರಾಮಗಳ ದೂರ, ಅಲ್ಲಿರತಕ್ಕ ಪ್ರಕೃತಿಯ ಪರಿಸರ-ಅವುಗಳನ್ನೆಲ್ಲ ಗಮನಕ್ಕೆ ತೆಗೆದುಕೊಂಡು ನಿರ್ಧಾರ ಮಾಡಬೇಕಾಗುತ್ತದೆ. ಆ ಪ್ರದೇಶ ಮಲೆನಾಡು ಆಗಿದ್ದು, ಈ ನಿಯಮಗಳ ವ್ಯಾಪ್ತಿಗೆ ಬರುವುದಾದರೆ ಮತ್ತು ದಾನಿಗಳೂ ಮುಂದೆ ಬಂದರೆ ಆ ಊರಿಗೆ ಆಸ್ಪತ್ರೆ ಕೊಡುವುದಕ್ಕೆ ಸರ್ಕಾರ ಪರಿಶೀಲನೆ ಮಾಡುತ್ತದೆನ್ನುವ ಮಾತನ್ನು ಹೇಳಬಯಸುತ್ತೇನೆ.

ವಿಷಯ:- ಮೂಡಿಗೆರೆ ತಾಲ್ಲೂಕಿನಲ್ಲಿ ಪರಿಶಿಷ್ಟ ವರ್ಗದ ಬಾಲಕರ ಹಾಸ್ಟೆಲ್.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 480 (1596)

ಶ್ರೀಮತಿ ಮೋಟಮ್ಮ (ಮೂಡಿಗೆರೆ):- ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ .

ಅ ಮೂಡಿಗೆರೆ ತಾಲ್ಲೂಕಿನಲ್ಲಿರುವ ಪರಿಶಿಷ್ಟ ವರ್ಗದ ಬಾಲಕರ ಹಾಸ್ಟೆಲ್ ಪ್ರಾರಂಭವಾಗಿ 6 ವರ್ಷಗಳಾದರೂ ಸರಿಯಾದ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?